ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 18ನೇ ನವೆಂಬರ್, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೂರನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಇಪ್ಪತ್ತೂರನೇ ಪಟ್ಟಿ

2. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:-

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ, ರಾಷ್ಟ್ರಪತಿ/ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದೆ ಮಂಡಿಸುವುದು.

3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಸದಸ್ಯರಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ 6 ಹಾಗೂ 7 ನೇ ಪಟ್ಟಿಯ ರೀತ್ಯಾ.

4. ಶಾಸನ ರಚನೆ

ವಿಧೇಯಕವನ್ನು ಮಂಡಿಸುವುದು

ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ)ವಿಧೇಯಕ, 2015
ಶ್ರೀ ಹೆಚ್.ಕೆ. ಪಾಟೀಲ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) ಅವರು:-

ಅ) 2015ನೇ ಸಾಲಿನ ಕರ್ನಾಟಕ ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು.

ಆ)ಹಾಗೂ ವಿಧೇಯಕವನ್ನು ಮಂಡಿಸುವುದು.

ಮು.ತಿ.ನೋ

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1. ಶ್ರೀಯುತರುಗಳಾದ ಬಿ.ಆರ್. ಪಾಟೀಲ್, ಜಿ. ರಾಮಕೃಷ್ಣ ಮತ್ತು ಮಾಲಿಕಯ್ಯ ವಿ. ಗುತ್ತೇದಾರ್ ಅವರುಗಳು ರಾಜ್ಯದಲ್ಲಿ ಮಳೆ ಕಡಿಮೆಯಾಗಿ, ಬರಗಾಲದಿಂದ ಕೃಷಿ ಬೆಳೆಗಳು ಹಾಳಾಗಿರುವುದು, ಜನಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆಯಾಗಿರುವುದು, ಬರಗಾಲದಿಂದ ರೈತರು ಅನೇಕ ಸಂಕಷ್ಟಗಳಿಗೆ ಒಳಗಾಗಿರುವ ಬಗ್ಗೆ ಚರ್ಚಿಸುವುದು.

2. ಶ್ರೀಯುತರುಗಳಾದ ಬಿ.ಎನ್. ವಿಜಯಕುಮಾರ್, ಎಸ್. ಸುರೇಶ್‌ಕುಮಾರ್, ಎಸ್. ರಘು ಹಾಗೂ ಎಲ್.ಎ. ರವಿಸುಬ್ರಮಣ್ಯ ಅವರುಗಳು ಬೆಂಗಳೂರು ನಗರದಲ್ಲಿ ಕಸದ ಸಮಸ್ಯೆ ಹೆಚ್ಚಾಗಿದ್ದು, ಕಸ ವಿಲೇವಾರಿಯಾಗದೆ ರಸ್ತೆ, ಪಾರ್ಕ್ ಮತ್ತು ಖಾಲಿ ನಿವೇಶನಗಳಲ್ಲಿ ಕಸವನ್ನು ಅವೈಜ್ಞಾನಿಕವಾಗಿ ವಿಂಗಡಣೆ ಮಾಡಲಾಗುತ್ತಿರುವುದರಿಂದ ಸಾರ್ವಜನಿಕರಿಗೆ ಅನಗತ್ಯ ಕಿರಿಕಿರಿ ಉಂಟಾಗಿ ಆರೋಗ್ಯಕ್ಕೆ ಹಾನಿಯುಂಟಾಗುತ್ತಿದ್ದು, ಕಸದ ಸಮಸ್ಯೆಯನ್ನು ವೈಜ್ಞಾನಿಕವಾಗಿ ನಿಭಾಯಿಸುವ ಬಗ್ಗೆ ಚರ್ಚಿಸುವುದು.

6. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು-ಚಿಕ್ಕಬಳ್ಳಾಪುರ ಜಿಲ್ಲೆ ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗುಡಿಬಂಡೆ ತಾಲ್ಲೂಕಿನ ಸೋಮೇನಹಳ್ಳಿ ಹೋಬಳಿಯಲ್ಲಿ 66/11 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರದ ಕಾಮಗಾರಿ ಪ್ರಾರಂಭವಾಗಿ ಅನೇಕ ತಿಂಗಳು ಕಳೆದಿದ್ದರೂ ಗುತ್ತಿಗೆದಾರರು ಕಾಮಗಾರಿಯನ್ನು ಪೂರ್ಣಗೊಳಿಸಲು ವಿಳಂಬ ಮಾಡುತ್ತಿರುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

2. ಶ್ರೀ ಕೆ.ಜಿ. ಬೋಪಯ್ಯ ಅವರು-ಅರಣ್ಯ ಇಲಾಖೆಗೆ ಹಸ್ತಾಂತರಿಸಿರುವ ಸಿ ಅಂಡ್ ಡಿ ಜಮೀನುಗಳನ್ನು ವಾಪಸ್ಸು ಪಡೆಯದೆ ಫಾರಂ 50, 53ರ ಅಡಿಯಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಅಕ್ರಮ-ಸಕ್ರಮಗೊಳಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ, ಸಿ ಅಂಡ್ ಡಿ ಜಮೀನುಗಳನ್ನು ಅರಣ್ಯ ಇಲಾಖೆಯಿಂದ ವಾಪಸ್ಸು ಪಡೆದು ಅನುಭೋಗದಲ್ಲಿರುವವರಿಗೆ ಸಾಗುವಳಿ ಪತ್ರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

3. ಶ್ರೀ ಮಾನಪ್ಪ ಡಿ.ವಜ್ಜಲ್ ಅವರು-ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದ ದೊಡ್ಡ ಕೆರೆಯನ್ನು 'ರಾಷ್ಟ್ರೀಯ ಕೆರೆ ಸಂರಕ್ಷಣಾ ಯೋಜನೆ' ಅಡಿ ಅಭಿವೃದ್ಧಿಪಡಿಸುವ ಬಗ್ಗೆ ಮಾನ್ಯ ಅರಣ್ಯ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು-ಆಂಧ್ರಪ್ರದೇಶದ ತಿರುಪತಿ ತಿರುಮಲದಲ್ಲಿರುವ ರಾಜ್ಯದ ಅಥಿತಿ ಗೃಹಗಳನ್ನು ಆನ್‌ಲೈನ್ ಮೂಲಕ ಕಾಯ್ದಿರಿಸುತ್ತಿರುವುದರಿಂದ ರಾಜ್ಯದ ಯಾತ್ರಾರ್ಥಿಗಳಿಗೆ ತೊಂದರೆಯಾಗುತ್ತಿದ್ದು, ಈ ಪದ್ಧತಿಯನ್ನು ಕೈಬಿಡುವ ಬಗ್ಗೆ ಮಾನ್ಯ ಅಬಕಾರಿ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

5. ಶ್ರೀ ಎನ್.ಹೆಚ್. ಕೋನರಡ್ಡಿ ಅವರು-ನವಲಗುಂದ ವಿಧಾನಸಭಾ ಕ್ಷೇತ್ರ ಹಾಗೂ ಧಾರವಾಡ ಜಿಲ್ಲೆಯ ಇತರ ಭಾಗಗಳಲ್ಲಿ ರೈತರು ಬೆಳೆದಿದ್ದ ಈರುಳ್ಳಿ ಬೆಳೆಯು ಸಿಡಿಲು ಮತ್ತು ಅತೀವೃಷ್ಟಿಯಿಂದ ನಾಶವಾಗಿರುವುದು, ಬೆಳೆ ಪರಿಹಾರ ಬಿಡುಗಡೆ ಬಗ್ಗೆ ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ

6. ಶ್ರೀ ಮಾಲಿಕಯ್ಯ ವಿ.ಗುತ್ತೇದಾರ್ ಅವರು-ಅಫಜಲಪೂರ ತಾಲ್ಲೂಕಿನಲ್ಲಿರುವ ಪ್ರಸಿದ್ಧ ದತ್ತಾತ್ರೇಯ ದೇವಸ್ಥಾನಕ್ಕೆ ಬರುವ ಸ್ಟೇಷನ್ ಗಾಣಗಾಪುರದಿಂದ ರೇವೂರ ರಸ್ತೆ, ದೇವಲಗಾಣಗಾಪುರದಿಂದ ಅಫಜಲಪೂರದವರೆಗಿನ ರಸ್ತೆ ಹಾಗೂ ಚೌಡಾಪುರದಿಂದ ಚಿನ್ಮಳ್ಳಿವರೆಗಿನ ರಸ್ತೆಯು ತುಂಬಾ ಹದಗೆಟ್ಟಿದ್ದು, ಸದರಿ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅಗತ್ಯವಿರುವ ಅನುದಾನವನ್ನು ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಲೋಕೋಪಯೋಗಿ ಸಚಿವರ ಗಮನ ಸೆಳೆಯುವುದು.

7. ಶ್ರೀ ಹೆಚ್.ಡಿ. ರೇವಣ್ಣ ಅವರು-ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಹಳೇಕೋಟೆ ಹೋಬಳಿ ಅತ್ತಿಚೌಡೇನಹಳ್ಳಿ ಗ್ರಾಮದ ಒಂಟಿಗುಡ್ಡ ಕಾವಲ್ ಸರ್ವೆ ನಂ:1ರಲ್ಲಿ ಸರ್ಕಾರದಿಂದ ಕಾಯ್ದಿರಿಸಲಾಗಿರುವ ಜಮೀನಿನಲ್ಲಿ ಅನಧಿಕೃತ ಸಾಗುವಳಿದಾರರಿಗೆ ಹಾಗೂ ಮುಳುಗಡೆ ನಿರಾಶ್ರಿತರಿಗೆ ಉಳಿದಿರುವ 831.1 ಎಕರೆ ಜಮೀನನ್ನು ಮಂಜೂರು ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

ಎಸ್.ವೈ. ಕುಳಗೇರಿ
ಕಾರ್ಯದರ್ಶಿ(ಪ್ರ)

NR